ಎಫ್.ಎ.ಕ್ಯೂ. ಗುಣಮಟ್ಟದ ಬಿಳಿ (ಚಾಲಿ) ಪ್ರಬೇದದ ಅಡಿಕೆಗೆ ರಾಜ್ಯ ಸರ್ಕಾರದ ಪ್ರಸ್ತಾವನೆ ಮೇರೆಗೆ ಪ್ರತಿ ಕ್ವಿಗೆ ರೂ. 8900/– ಗಳಂತೆ ಮಾರುಕಟ್ಟೆ ಮಧ್ಯಪ್ರವೇಶ ಯೋಜನೆಯಡಿ ಖರೀದಿಸಲು ಕೇಂದ್ರ ಸರ್ಕಾರವು ಮಂಜೂರಾತಿ ನೀಡಿರುತ್ತದೆ. ರಾಜ್ಯ ಸರ್ಕಾರ ಆದೇಶ ಹೊರಡಿಸಿಲ್ಲ.

ಇ) ಕೇಂದ್ರ ಸರ್ಕಾರವು ಮಾರುಕಟ್ಟೆ ಮಧ್ಯಪ್ರವೇಶ ಯೋಜನೆಯಡಿ ಎಫ್.ಎ.ಕ್ಯೂ. ಗುಣಮಟ್ಟದ ಕೆಂಪು ಪ್ರಬೇದದ ಅಡಿಕೆಗೆ ಪ್ರತಿ ಕ್ವಿಂಟಾಲ್‌ಗೆ ರೂ. 8.900/–ರ ಬೆಂಬಲ ಬೆಲೆಯಲ್ಲಿ ಖರೀದಿಸಲು ಅನುಮತಿ ನೀಡಿದ್ದು, ಸದರಿ ಮಾರಾಟ ಪ್ರಕ್ರಿಯೆಯಲ್ಲಿ ನಷ್ಟವಾದಲ್ಲಿ ಶೇ.50ರಷ್ಟು ನಷ್ಟವನ್ನು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಸಮನಾಗಿ ಹಂಚಿಕೊಳ್ಳಲಿವೆ.

896 ಶ್ರೀ ಖಾದರ್ ಯು.ಟಿ. (ಮಂಗಳೂರು): ಮಾನ್ಯ ಕೃಷಿ ಮಾರುಕಟ್ಟೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನ ವರ್ತಕರ ಮೇಲೆ ಎ.ಪಿ.ಎಂ.ಸಿ. ಅಧಿಕಾರಿಗಳು ದೌರ್ಜನ್ಯ ನಡೆಸಿ, ಪ್ರಕರಣವನ್ನು ದಾಖಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಪ್ರಕರಣಗಳನ್ನು ಹಿಂದಕ್ಕೆ ಪಡೆಯಲು ಸರ್ಕಾರ ಉದ್ದೇಶಿಸಿದೆಯೇ;

ಇ) ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗುವುದು?

ಶ್ರೀ ಶಿವರಾಜ್ ಎಸ್. ತಂಗಡಗಿ (ಕೃಷಿ ಮಾರುಕಟ್ಟೆ ಮತ್ತು ಸಕ್ಕರೆ ಸಚಿವರು):

ಅ) ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ 1966ರ ಕಲಂ 8ರ ಉಲ್ಲಂಘನೆಗಾಗಿ ದಿ: 29.5.2008ರ ಸಮಿತಿಯ ತೀರ್ಮಾನದ ಮೇರೆಗೆ 40 ಹಾಗೂ ದಿ: 23.3.2009ರಲ್ಲಿ 77 ವರ್ತಕರ ವಿರುದ್ಧ ಸ್ಥಳೀಯ ನ್ಯಾಯಾಲಯದಲ್ಲಿ

ಮೊಕದ್ದಮೆಯನ್ನು ಕೃಷಿ ಉತ್ವನ್ನ ಮಾರುಕಟ್ಟೆ ಸಮಿತಿ, ಮಂಗಳೂರು ದಾಖಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆ) 40 ಮಂದಿ ಪೇಟೆ ಕಾರ್ಯಕರ್ತರ ವಿರುದ್ಧ ಮಂಗಳೂರಿನ ಸ್ಥಳೀಯ ನ್ಯಾಯಾಲಯದಲ್ಲಿ ಹೂಡಲಾಗಿದ್ದ ಕೇಸುಗಳನ್ನು ಹಿಂದಕ್ಕೆ ತೆಗೆದುಕೊಳ್ಳುವ ಬಗ್ಗೆ ಅನುಮತಿ ಕೋರಿ ಕೃಷಿ ಮಾರಾಟ ಇಲಾಖೆಯು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದ್ದು, ಈ ಬಗ್ಗೆ ಕಾನೂನು ನ್ಯಾಯ ಮತ್ತು ಮಾನವ ಹಕ್ಕುಗಳ ಅಭಿಪ್ರಾಯ ಪಡೆಯಲಾಗಿದ್ದು, ಸದರಿ ಅಭಿಪ್ರಾಯದ ಹಿನ್ನೆಲೆಯಲ್ಲಿ, ಕ್ರಿಮಿನಲ್ ಮೊಕದ್ದಮೆ ಹಿಂಪಡೆಯುವ ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ.

ದಿ: 23.3.2009ರಲ್ಲಿ ಮಾರುಕಟ್ಟೆ ಸಮಿತಿಯು 77 ಪೇಟೆ ಕಾರ್ಯಕರ್ತರ ವಿರುದ್ಧ ಸ್ಥಳೀಯ ಮಂಗಳೂರು ನ್ಯಾಯಾಲಯದಲ್ಲಿ ಕೇಸು ದಾಖಲಿಸಿದ್ದರೆ ಔಚಿತ್ಯವನ್ನು ಪ್ರಶ್ನಿಸಿ 77 ಜನರ ಪೈಕಿ 30 ಮಂದಿ ವರ್ತಕರು ಮಾನ್ಯ ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ಕ್ರಿಮಿನಲ್ ರಿವಿಷನ್ ಪಿಟಿಷನ್ ದಾಖಲಿಸಿರುತ್ತಾರೆ. ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ವಿಚಾರಣೆಯು ಪ್ರಗತಿಯಲ್ಲಿರುತ್ತದೆ.

ಇ) ಸಮಿತಿಯು ಸ್ಥಳೀಯ ಮಂಗಳೂರು ನ್ಯಾಯಾಲಯದಲ್ಲಿ ಕೇಸು ದಾಖಲಿಸಿರುವುದು ನ್ಯಾಯಸಮ್ಮತ ಕ್ರಮವಲ್ಲವೆಂದು ಉಚ್ಚ ನ್ಯಾಯಾಲಯದಲ್ಲಿ ವರ್ತಕರು ದಾವೆಯನ್ನು ಹೂಡಿರುತ್ತಾರೆ. ಉಚ್ಚ ನ್ಯಾಯಾಲಯದ ತೀರ್ಮ ಬಂದ ನಂತರ, ನಿಯಮಾನುಸಾರ ಸಂಬಂಧಪಟ್ಟವರ ವಿರುದ್ಧ ಹಾಗೂ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸಲಾಗುವುದು.

900 ಶ್ರೀ ಹ್ಯಾರೀಸ್ ಎನ್.ಎ. (ಶಾಂತಿನಗರ ಕ್ಷೇತ್ರ): ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಖಾಲಿ ಇರುವ ಎ, ಬಿ, ಸಿ, ವರ್ಗಗಳ ಹುದ್ದೆಗಳ ಸಂಖ್ಯೆ ಎಷ್ಟು? (ಅವುಗಳನ್ನು ಭರ್ತಿ ಮಾಡಲು ಸರ್ಕಾರದ ಕ್ರಮಗಳೇನು)